# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸರ್ಕಾರದಿಂದ ಒದಗಿಸಲಾಗುವ ಎಲೆಕ್ಟ್ರಾನಿಕ್ ಉಪಕರಣಗಳ ಸವಕಳಿ ವೆಚ್ಚವನ್ನು ಸರ್ಕಾರಕ್ಕೆ ಪಾವತಿಸಿ ನಿವೃತ್ತ ಅಧಿಕಾರಿಗಳೇ ಉಪಯೋಗಿಸಿಕೊಳ್ಳುವ ಬಗ್ಗೆ.

ಓದಲಾಗಿದೆ:

1. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 180 ಡಿಇವಿ 2015, ದಿನಾಂಕ: 25.11.2015.
2. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಸಿಆಸುಇ 43 ಡಿಟಿಎನ್ 2018, ದಿನಾಂಕ: 140.04.2018
3. ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಸಚಿವಾಲಯ ಅಧಿಕಾರಿಗಳ ಸಂಘ, ಇವರ ಮನವಿ ದಿನಾಂಕ: 15.07.2016 ಹಾಗೂ 26.04.2018.
4. ಸಿಆಸುಇ(ಇ-ಆಡಳಿತ) ಇಲಾಖೆಯ ಟಿಪ್ಪಣಿ ಸಂಖ್ಯೆ: 112 ಇಜಿವಿ 2018, ದಿನಾಂಕ: 08.08.2018

*****

**ಪ್ರಸ್ತಾವನೆ:**

ಮೇಲೆ ಕ್ರಮಾಂಕ (1)ರಲ್ಲಿ ಓದಲಾದ ಅಧಿಕೃತ ಜ್ಞಾಪನದಲ್ಲಿ, ಸಚಿವಾಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಅದಕ್ಕಿಂತ ಮೇಲ್ದರ್ಜೆಯ ಅಧಿಕಾರಿಗಳಿಗೆ ಸರ್ಕಾರದಿಂದ ಒದಗಿಸಲಾದ ಕಂಪ್ಯೂಟರ್, ಪ್ರಿಂಟರ್, ಸ್ಕ್ಯಾನರ್, ಸಿ.ಡಿ. ರೈಟರ್, ಮೊಬೈಲ್/ಸ್ಮಾರ್ಟ್‌ಫೋನ್ ಮತ್ತು ಲ್ಯಾಪ್‌ಟಾಪ್‌ನ್ನು 3(ಮೂರು) ವರ್ಷಗಳಿಗೂ ಮೇಲ್ಪಟ್ಟು ಉಪಯೋಗಿಸಿಕೊಂಡಿದ್ದಲ್ಲಿ, ಅದರ ಮೂಲ ಬೆಲೆಯ ಶೇಕಡ 10 ರಷ್ಟು ಕನಿಷ್ಟ ಬೆಲೆಯನ್ನು ನಿಗದಿಪಡಿಸಿ ಅವರೇ ಉಪಯೋಗಿಸಿಕೊಳ್ಳಲು ಅನುಮತಿಯನ್ನು ನೀಡುವುದು ಎಂದು ಆದೇಶಿಸಲಾಗಿತ್ತು.

ಕರ್ನಾಟಕ ಸರ್ಕಾರದ ಸಚಿವಾಲಯ

ಮೇಲೆ ಕ್ರಮಾಂಕ (2)ರಲ್ಲಿ ಓದಲಾದ ತಿದ್ದುಪಡಿ ಆದೇಶದಲ್ಲಿ ಉಲ್ಲೇಖಿತ (1)ರ ಆದೇಶದ ಕ್ರಮ ಸಂಖ್ಯೆ: 2ರಲ್ಲಿ ನಮೂದಿಸಿರುವ "ಅದರ ಮೂಲ ಬೆಲೆಯ ಶೇಕಡ 10ರಷ್ಟು" ಎಂಬುದರ ಬದಲಾಗಿ "ಸರ್ಕಾರವು ನೀಡಿದ ಹಣದ ಶೇಕಡ 10ರಷ್ಟು" ಎಂದು ತಿದ್ದಿಕೊಂಡು ಓದಿಕೊಳ್ಳತಕ್ಕದ್ದು ಎಂದು ಆದೇಶಿಸಲಾಗಿತ್ತು.

ಮೇಲೆ ಕ್ರಮಾಂಕ (3)ರಲ್ಲಿ ಓದಲಾದ ಪತ್ರಗಳಲ್ಲಿ, ಕರ್ನಾಟಕ ಸರ್ಕಾರದ ಸಚಿವಾಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ತತ್ಸಮಾನ ಹಾಗೂ ಅದಕ್ಕಿಂತ ಮೇಲ್ದರ್ಜೆಯ ಅಧಿಕಾರಿಗಳಿಗೆ ಲ್ಯಾಪ್‌ಟಾಪ್‌ಗಳನ್ನು ಒದಗಿಸಲಾಗುತ್ತಿದ್ದು, ಸರ್ಕಾರದ ಅಧೀನ ಕಾರ್ಯದರ್ಶಿ ಹಾಗೂ ತತ್ಸಮಾನ ಹಾಗೂ ಅದಕ್ಕಿಂತ ಮೇಲ್ದರ್ಜೆಯ ಅಧಿಕಾರಿಗಳು ಸರ್ಕಾರದಿಂದ ಒದಗಿಸಲಾದ ಎಲೆಕ್ಟ್ರಾನಿಕ್ ಉಪಕರಣಗಳ ಸವಕಳಿ ವೆಚ್ಚವನ್ನು ಸರ್ಕಾರಕ್ಕೆ ಪಾವತಿಸಿ ನಿವೃತ್ತ ಅಧಿಕಾರಿಗಳೇ ಉಪಯೋಗಿಸಿಕೊಳ್ಳಲು ಅನುವಾಗುವಂತೆ ಸೂಕ್ತ ಮಾರ್ಪಾಡಿತ ಆದೇಶವನ್ನು ಹೊರಡಿಸುವಂತೆ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಸಚಿವಾಲಯ ಅಧಿಕಾರಿಗಳ ಸಂಘ ಅವರು ಕೋರಿರುತ್ತಾರೆ.

ಮೇಲೆ ಕ್ರಮಾಂಕ (4)ರಲ್ಲಿ ಓದಲಾದ ಟಿಪ್ಪಣಿಯಲ್ಲಿ ಸರ್ಕಾರದ ಉಪ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ(ಇ-ಆಡಳಿತ) ಇವರು "ಪ್ರಸ್ತುತ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 180 ಡಿಇವಿ 2015, ದಿನಾಂಕ: 25.11.2015 ರನ್ವಯ ಸರ್ಕಾರದ ಉಪ ಕಾರ್ಯದರ್ಶಿ ಹುದ್ದೆಗಿಂತ ಮೇಲ್ಪಟ್ಟ ಅಧಿಕಾರಿಗಳಿಗೆ ಒದಗಿಸಲಾದ ಎಲೆಕ್ಟ್ರಾನಿಕ್ ಉಪಕರಣಗಳ ಸವಕಳಿಯ ವೆಚ್ಚವನ್ನು ಸರ್ಕಾರಕ್ಕೆ ಮರುಪಾವತಿಸಿ ನಿವೃತ್ತಿ ಅಧಿಕಾರಿಗಳೇ ಉಪಯೋಗಿಸುವ ಸೌಲಭ್ಯವನ್ನು ಸರ್ಕಾರದ ಅಧೀನ ಕಾರ್ಯದರ್ಶಿಗಳಿಗೂ ವಿಸ್ತರಿಸಬಹುದೆಂದು" ತಿಳಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 131 ಡಿಇವಿ 2016, ಬೆಂಗಳೂರು, ದಿನಾಂಕ: 21-03-2019.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸರ್ಕಾರ ಸಚಿವಾಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರದ ಅಧೀನ ಕಾರ್ಯದರ್ಶಿ ಹಾಗೂ ತತ್ಸಮಾನ ಹಾಗೂ ಅದಕ್ಕಿಂತ ಮೇಲ್ದರ್ಜೆಯ ಅಧಿಕಾರಿಗಳಿಗೆ ಸರ್ಕಾರದಿಂದ ಒದಗಿಸಲಾದ ಕಂಪ್ಯೂಟರ್, ಪ್ರಿಂಟರ್, ಸ್ಕ್ಯಾನರ್, ಸಿ.ಡಿ. ರೈಟರ್, ಮೊಬೈಲ್/ಸ್ಮಾರ್ಟ್‌ಫೋನ್ ಮತ್ತು ಲ್ಯಾಪ್‌ಟಾಪ್‌ಗಳ ಬೆಲೆಯ ಸವಕಳಿ ಮಾನದಂಡವನ್ನು ಈ ಕೆಳಕಂಡಂತೆ ನಿಗದಿಪಡಿಸಲಾಗಿದೆ. ಅದರಂತೆ ಸವಕಳಿ ವೆಚ್ಚವನ್ನು ಸರ್ಕಾರಕ್ಕೆ ಪಾವತಿಸಿ ಎಲೆಕ್ಟ್ರಾನಿಕ್ ಉಪಕರಣಗಳನ್ನು ಅಧಿಕಾರಿಗಳೇ ಉಪಯೋಗಿಸಿಕೊಳ್ಳಲು ಮಂಜೂರಾತಿ ನೀಡಿದೆ.

1. ಕಂಪನೀಸ್ ಆಕ್ಟ್‌ನಂತೆ ಪ್ರತಿ ವರ್ಷಕ್ಕೆ ಶೇಕಡ 40 ರಂತೆ ಸವಕಳಿ ಮಾಡಿ ಕಂಪ್ಯೂಟರ್, ಪ್ರಿಂಟರ್, ಸ್ಕ್ಯಾನರ್, ಸಿ.ಡಿ. ರೈಟರ್, ಮೊಬೈಲ್/ಸ್ಮಾರ್ಟ್‌ಫೋನ್ ಮತ್ತು ಲ್ಯಾಪ್‌ಟಾಪ್‌ಗಳ ಬೆಲೆಯನ್ನು ನಿಗದಿಪಡಿಸಿದೆ.

2. ಕಂಪ್ಯೂಟರ್, ಪ್ರಿಂಟರ್, ಸ್ಕ್ಯಾನರ್, ಸಿ.ಡಿ. ರೈಟರ್, ಮೊಬೈಲ್/ಸ್ಮಾರ್ಟ್‌ಫೋನ್ ಮತ್ತು ಲ್ಯಾಪ್‌ಟಾಪ್‌ನ್ನು 3 (ಮೂರು) ವರ್ಷಗಳಿಗೂ ಮೇಲ್ಪಟ್ಟು ಉಪಯೋಗಿಸಿಕೊಂಡಿದ್ದಲ್ಲಿ, ಸರ್ಕಾರವು ನೀಡಿದ ಹಣದ ಶೇಕಡ 10ರಷ್ಟು ಕನಿಷ್ಟ ಬೆಲೆಯನ್ನು ನಿಗದಿಪಡಿಸಿ ಅವರೇ ಉಪಯೋಗಿಸಿಕೊಳ್ಳಲು ಅನುಮತಿ ನೀಡಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 999 ವೆಚ್ಚ-12/2018, ದಿನಾಂಕ: 14.03.2019 ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

21.3

(ಕೇಶವಪ್ರಸಾದ್ ಕೆ.ಹೆಚ್.)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಸಿಆಸುಇ (ಕಾರ್ಯಕಾರಿ)

**ಗೆ:**

1) ಪ್ರಧಾನ ಮಹಾಲೇಖಪಾಲರು, (ಜಿ & ಎಸ್ ಎಸ್ ಎ) ಕರ್ನಾಟಕ, ಹೊಸ ಕಟ್ಟಡ ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398 ಬೆಂಗಳೂರು-01.
2) ಸರ್ಕಾರದ ಮುಖ್ಯ ಕಾರ್ಯದರ್ಶಿಯವರು ಹಾಗೂ ಅವರ ಆಪ್ತ ಕಾರ್ಯದರ್ಶಿಯವರು
3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು ಹಾಗೂ ಅವರ ಆಪ್ತ ಕಾರ್ಯದರ್ಶಿಗಳು
4) ಸರ್ಕರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು ಹಾಗೂ ಅವರ ಆಪ್ತ ಕಾರ್ಯದರ್ಶಿಗಳು
5) ಸರ್ಕಾರದ ಎಲ್ಲಾ ವಿಶೇಷ ಕಾರ್ಯದರ್ಶಿಗಳು/ಅಪರ ಕಾರ್ಯದರ್ಶಿಗಳು ಹಾಗೂ ಅವರ ಆಪ್ತ ಕಾರ್ಯದರ್ಶಿಗಳು

---3